ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 12 ನೇ ಮಾರ್ಚ್, 2020

ಮದ್ಯ ಮಾರಾಟ ಹೆಚ್ಚಿಸಲು ಒತ್ತಡ ಹೇರುತ್ತಿರುವ ಬಗ್ಗೆ

ಡಾ|| ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-

752 (999) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಅಬಕಾರಿ ಇಲಾಖೆಯ ಅಧಿಕಾರಿಗಳು ಸನ್ನದ್ದುದಾರರ ಮೇಲೆ ಒತ್ತಡ ಹಾಕಿ ಮದ್ಯ ಮಾರಾಟ ಪ್ರಮಾಣವನ್ನು ಹೆಚ್ಚಿಸಲು ಪ್ರಯತ್ನಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇಂತಹ ಒತ್ತಡಗಳಿಂದ ಸನ್ನದ್ದುದಾರರು ಮಾನಸಿಕ ಒತ್ತಡ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಅಬಕಾರಿ ಸನ್ನದ್ದನ್ನು ನವೀಕರಣ ಮಾಡಲು ಇರುವ ಪದ್ದತಿ ಏನು; (ವಿವರಗಳನ್ನು ನೀಡುವುದು)

(ಈ) ಪ್ರತಿ ವರ್ಷ ಮದ್ಯದಂಗಡಿಗಳ ನವೀಕರಣ ಮಾಡುವ ಪದ್ದತಿಯಿಂದ ಅಬಕಾರಿ ಇಲಾಖೆ ಅಧಿಕಾರಿಗಳು ಹೇರಳವಾಗಿ ಮಿತಿಮೀರಿ ಲಂಚವನ್ನು ನಿಗದಿಪಡಿಸಿರುವ ವಿಚಾರವು ಸಾರ್ವಜನಿಕ ವಲಯದಲ್ಲಿ ಬಹಳಷ್ಟು ಚರ್ಚೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?